22

ಇಲಾಖೆ / ವಿಷಯ : DEPARTMENT / SUBJECT: ಸಚಿವ ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 3/2/2021

# ಸಂಪುಟ ಸಭೆ ಕರೆದು ದಿಢೀರ್ ರದ್ದು

ಬೆಂಗಳೂರು: ಮಂಗಳವಾರ ಮುಖ್ಯಮಂತ್ರಿ ಯಡಿಯೂರಪ್ಪ ದಿಢೀರ್ ಸಂಪುಟ ಸಭೆ ಕರೆದು ಮತ್ತೆ ಒಂದೇ ಗಂಟೆಯಲ್ಲಿ ಸಂಪುಟ ಸಭೆ ರದ್ದು ಮಾಡಿದ ಪ್ರಸಂಗ ನಡೆದಿದೆ. ಸಂಪುಟ ಸಭೆ ಕರೆಯಲು ಯಾವುದೇ ನಿರ್ದಿಷ್ಟ ಕಾರ್ಯಸೂಚಿಯ ಬಗ್ಗೆ ಯಾವುದೇ ಸಚಿವರಿಗೂ ಅಧಿಕೃತ ಮಾಹಿತಿ ನೀಡಿರಲಿಲ್ಲ. ಮೂಲಗಳ ಪ್ರಕಾರ ವಿಧಾನ ಪರಿಷತ್ತಿನಲ್ಲಿ ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆ ಕುರಿತು ಗೊಂದಲ ಉಂಟಾಗಿತ್ತು ಎನ್ನುವ ಕಾರಣಕ್ಕೆ ಈ ಕುರಿತು ಸಂಪುಟ ಸಭೆಯಲ್ಲಿ ಸಂಪುಟ ಸಹೋದ್ಯೋಗಿಗಳೊಂದಿಗೆ ಚರ್ಚಿಸಲು ಸಿಎಂ ನಿರ್ಧರಿಸಿದ್ದರು ಎನ್ನಲಾಗಿದ್ದು ಅದೇ ಕಾರಣಕ್ಕೆ ತುರ್ತು ಸಂಪುಟ ಸಭೆ ಕರೆದಿದ್ದರು ಎಂದು ಹೇಳಲಾಗುತ್ತಿದೆ. ಆದರೆ, ಮಧ್ಯಾಹ್ನದ ಹೊತ್ತಿಗೆ ವಿಧಾನ ಪರಿಷತ್ತಿನಲ್ಲಿ ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆಗೆ ಒಪ್ಪಿಗೆ ದೊರೆತಿದ್ದರಿಂದ ಮುಖ್ಯಮಂತ್ರಿ ಯಡಿಯೂರಪ್ಪ ದಿಢೀರ್ ಸಂಪುಟ ಸಭೆ ವಾಪಸ್ ಪಡೆದಿದ್ದಾರೆ ಎಂದು ಹೇಳಲಾಗುತ್ತಿದೆ.